ಆ) ಈ ಆಸ್ಪತ್ರೆಯು ಜಿಲ್ಲಾ ಪರಿಷತ್ತಿನ ವ್ಯಾಪ್ತಿಯಲ್ಲಿ ಬರುವುದರಿಂದ ಆ್ಯಂಬುಲೆನ್ಸ್ ಖರೀದಿಸಲು ಬೇಕಾಗುವ ಹಣವನ್ನು ಜಿಲ್ಲಾ ಪರಿಷತ್ತೇ ಭರಿಸಬೇಕಾಗುತ್ತದೆ. ಇದಕ್ಕೆ ಬೇಕಾಗುವ ಹಣವನ್ನು 1991-92ರ ಅನುಧಾನದಲ್ಲಿ ಅಳವಡಿಸಿಕೊಂಡು ಆ ಆ್ಯಂಬುಲೆನ್ಸ್‌ನ್ನು ಒದಗಿಸಲು ಜಿಲ್ಲಾ ಪರಿಷತ್ತಿನ ಮುಖ್ಯ ಕಾರ್ಯದರ್ಶಿಯವರಲ್ಲಿ ವಿನಂತಿಸಿಕೊಳ್ಳಲಾಗುವುದು.

ಶಂಕರನಾರಾಯಣ ಪ್ರಥಮ ದರ್ಜೆಯ ಕಾಲೇಜು.

1677 - ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) : ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕುಂದಾಪುರ ತಾಲ್ಲೂಕಿನ ಶಂಕರನಾರಾಯಣ ಗ್ರಾಮದಲ್ಲಿ ಪ್ರಥಮ ದರ್ಜೆಯ ಕಾಲೇಜು ತೆರೆಯುವ ಯೋಜನೆ ಸರ್ಕಾರಕ್ಕೆ ಇದೆಯೇ?

ಆ) ಶಂಕರನಾರಾಯಣ ಗ್ರಾಮದಲ್ಲಿ ಪ್ರಥಮ ದರ್ಜೆಯ ಕಾಲೇಜು ಪ್ರಾರಂಭಿಸಿದರೆ ಹೊಸಂಗಡಿ ಪ್ರೌಢಶಾಲೆ, ಸಿದ್ಧಾಪುರ ಪ್ರೌಢಶಾಲೆ, ಶಂಕರನಾರಾಯಣ ಪ್ರೌಢಶಾಲೆ, ಗೋಳಿಯಂಗಡಿ ಪ್ರೌಢಶಾಲೆ, ಅಮಾವಾಸ್ಯೆ ಬೈಲು ಪ್ರೌಢಶಾಲೆ, ಬಿದ್ಕಲ್‌ಕಟ್ಟೆ ಪ್ರೌಢಶಾಲೆ, ಅಂಪಾರು ಪ್ರೌಢಶಾಲೆ, ಅಲ್ಬಾಡಿ ಪ್ರೌಢಶಾಲೆ ಹೀಗೆ 8 (ಎಂಟು) ಪ್ರೌಢಶಾಲೆಯ ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ಅನುಕೂಲವಾಗುವುದು ನಿಜವೆ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮಂತ್ರಿಗಳು) :

ಅ) ಇಲ್ಲ.

ಆ) ಇದರ ಬಗ್ಗೆ ಕಾಲೇಜು ಶಿಕ್ಷಣ ನಿರ್ದೇಶನಾಲಯದಿಂದ ವಿವರವಾದ ವರದಿಯನ್ನು ಕೋರಲಾಗಿದೆ. ಇದನ್ನು ಸೂಕ್ತ ಸಮಯದಲ್ಲಿ ಪರಿಶೀಲಿಸಲಾಗುವುದು.

ಮಣಗಾನಹಳ್ಳಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ.

1690 - ಶ್ರೀ ಹೆಚ್.ಎಂ. ರೇವಣ್ಣ (ಮಾಗಡಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಗಡಿ ತಾಲ್ಲೂಕು ಕುದೂರು ಹೋಬಳಿ ನಾರಸಂದ್ರ ಮಂಡಳ ವ್ಯಾಪ್ತಿಯೊಳಗೆ ಇರುವ ಮಣಗಾನ ಹಳ್ಳಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪನೆಗೆ ಸರ್ಕಾರಕ್ಕೆ ಕೇವಣಿ ಹಣ ಕಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸರ್ಕಾರವು ಈ ವರ್ಷದಲ್ಲಿ ಪ್ರಾರಂಭ ಮಾಡಲು ಯೋಜಿಸಿದೆಯೇ?

ಶ್ರೀಮತಿ ಕೆ.ಎಸ್. ನಾಗರತ್ನಮ್ಮ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು):

ಅ) ಬಂದಿದೆ.

ಆ) ಇಲ್ಲ. ಮುಂಬರುವ ವರ್ಷಗಳಲ್ಲಿ ಜಿಲ್ಲಾ ಪರಿಷತ್ ಈ ಗ್ರಾಮಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮಂಜೂರು ಮಾಡಲು ಪ್ರಸ್ತಾಪಿಸಿದಲ್ಲಿ ಪರಿಶೀಲಿಸಲಾಗುವುದು.

ಕಪ್ಪು ಹಲಗೆ ಯೋಜನೆಯಡಿಯಲ್ಲಿ ರಾಜ್ಯ ಸರ್ಕಾರಕ್ಕೆ ಬಿಡುಗಡೆಯಾದ ಹಣ.

1691 - ಶ್ರೀ ಹೆಚ್.ಎಂ. ರೇವಣ್ಣ (ಮಾಗಡಿ) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರಿಗಳ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯಕ್ಕೆ ಕಪ್ಪು ಹಲಗೆ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಬಿಡುಗಡೆಯಾಗಿರುವ ಹಣ ಎಷ್ಟು?